## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 400 |
| ಮಾನ್ಯ ಸದಸ್ಯರ ಹೆಸರು | ಡಾ: ತಳವಾರ ಸಾಬಣ್ಣಾ |
| ಉತ್ತರಿಸಬೇಕಾದ ದಿನಾಂಕ | 12-12-2024 |
| ಉತ್ತರಿಸಬೇಕಾದವರು | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:30-10-2023ರಂದು ಕೋಲಿ / ಕಬ್ಬಲಿಗ /ಬೆಸ್ತ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಕುರಿತು ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾದವರು ಕಳುಹಿಸಿರುವ ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಈ ವರದಿಯು ಬಂದು ಒಂದು ವರ್ಷವಾದರೂ ಯಾವುದೇ ಕ್ರಮಗಳನ್ನು ಕೈಗೊಳ್ಳದಿರಲು ಕಾರಣಗಳೇನು; | ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರ ದಿನಾಂಕ:30-10-2023ರ ಪತ್ರದಲ್ಲಿ ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ಸೂಕ್ತ ಸಮರ್ಥನೆ / ಸ್ಪಷ್ಟೀಕರಣ / ದಾಖಲೆಗಳೊಂದಿಗೆ ವರದಿಯನ್ನು ಸಲ್ಲಿಸುವಂತೆ ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರನ್ನು ಕೋರಲಾಗಿದ್ದು, ಸದರಿಯವರಿಂದ ವರದಿ ನಿರೀಕ್ಷಿಸಲಾಗುತ್ತಿದೆ. |
| ಇ) | ಕೋಲಿ / ಕಬ್ಬಲಿಗ / ಬೆಸ್ತ / ಬಾರಿಕಾ/ ಅಂಬಿಗಾ /ಮೊಗವೀರ ಪರ್ಯಾಯ ಪದಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಬೇಕೆಂದು ಸುಮಾರು 40 ವರ್ಷಗಳಿಂದ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರದ ಸ್ಪಂದನೆ ಏನು; ಸೇರ್ಪಡೆ ಮಾಡದಿರಲು ಕಾರಣವೇನು; | ಭಾರತ ಸಂವಿಧಾನದ ಅನುಚ್ಛೇಧ 342ರನ್ವಯ ಯಾವುದೇ ಜಾತಿಯನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆ/ತೆಗೆದು ಹಾಕುವ/ಇನ್ನಾವುದೇ ಮಾರ್ಪಾಡು ಮಾಡುವ ಪರಮೋಚ್ಛ ಅಧಿಕಾರವನ್ನು ಕೇಂದ್ರ ಸರ್ಕಾರಕ್ಕೆ ಮಾತ್ರ ಇರುತ್ತದೆ.<br><br>ಅದರನ್ವಯ ಕರ್ನಾಟಕ ರಾಜ್ಯದಲ್ಲಿನ ಗಂಗಾಮತ ಮತ್ತು ಅದರ ಉಪ ಜಾತಿಗಳನ್ನು (ಕೋಲಿ / ಕಬ್ಬಲಿಗ/ ಬೆಸ್ತ / ಬಾರಿಕಾ / ಅಂಬಿಗಾ / ಮೊಗವೀರ ಸೇರಿದಂತೆ) ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವಂತೆ ಹಲವಾರು ಬಾರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಮುಂದುವರೆದು, ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ಇವರ ದಿನಾಂಕ:30-10-2023ರ |
| ಈ) | ಕೋಲಿ / ಕಬ್ಬಲಿಗ / ಬೆಸ್ತ / ಬಾರಿಕಾ / ಅಂಬಿಗಾ / ಮೊಗವೀರ ಪರ್ಯಾಯ ಪದಗಳನ್ನು ಟೋಕ್ರೆ ಕೋಲಿ / ಕೋಲಿ ಢೋರ್ / ಕೋಯಾ ಸದರಿ | |

| | | |
|---|---|---|
| | ಪದಗಳನ್ನು ಬಿಟ್ಟು ಹೊದ ಪದಗಳೆಂದು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ. | ಪತ್ರದಲ್ಲಿ ಗಂಗಾಮತ ಮತ್ತು ಅದರ 38 ಪರ್ಯಾಯ ಪದಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆಗೊಳಿಸುವ ಕರ್ನಾಟಕ ರಾಜ್ಯ ಪ್ರಸ್ತಾವನೆಗೆ ಬೆಂಬಲ ನೀಡಿರುವುದಿಲ್ಲ.<br><br>ಆದುದರಿಂದ, ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರ ದಿನಾಂಕ:30-10-2023ರ ಪತ್ರದಲ್ಲಿ ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ಸೂಕ್ತ ಸಮರ್ಥನೆ / ಸ್ಪಷ್ಟೀಕರಣ / ದಾಖಲೆಗಳೊಂದಿಗೆ ವರದಿಯನ್ನು ಸಲ್ಲಿಸುವಂತೆ ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರನ್ನು ಕೋರಲಾಗಿದ್ದು, ಸದರಿಯವರಿಂದ ವರದಿ ನಿರೀಕ್ಷಿಸಲಾಗುತ್ತಿದೆ. |

**STW/SECB/SAD/233/2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿ